(ಈ) ಹಾಗಿದ್ದಲ್ಲಿ ಈ ಪಟ್ಟಣದ ನೈರ್ಮಲ್ಯವನ್ನು ಕಾಪಾಡಲು ಸರ್ಕಾರ ರೂಪಿಸಿರುವ ಯೋಜನೆಗಳೇನು?

ಶ್ರೀ ಎಂ ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು) :

(ಅ) ಇಲ್ಲ.

(ಆ) ಬಸವಕಲ್ಯಾಣ ಪಟ್ಟಣದಲ್ಲಿ ಒಳಚರಂಡಿ ಯೋಜನೆ ಇರುವುದಿಲ್ಲ.

(ಇ) ಯಾವ ಪ್ರಸ್ತಾವನೆಗಳು ಸರ್ಕಾರದ ಮುಂದೆ ಇರುವುದಿಲ್ಲ. ಆದಾಗ್ಯೂ ದೈನಂದಿನ ನೈರ್ಮಲ್ಯವನ್ನು ಕಾಪಾಡಲಾಗುತ್ತಿದೆ.

(ಈ) ಉದ್ಭವಿಸುವುದಿಲ್ಲ.

ಬಸವಕಲ್ಯಾಣ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸುವವರಿಗೆ ಇರುವ ಉತ್ತೇಜನಗಳು.

2053 (2654) : ಶ್ರೀ ಎಂ.ಜಿ. ಮುಳೆ (ಬಸವಕಲ್ಯಾಣ) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಬಸವಕಲ್ಯಾಣ ಸಣ್ಣ ಕೈಗಾರಿಕೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ರೂಪಿಸಿರುವ ಯೋಜನೆಗಳೇನು, ಹಾಗೂ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸುವವರಿಗೆ ಯಾವ ಯಾವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದು?

(ಆ) ಇದಕ್ಕಾಗಿ ಕೆ.ಎಸ್.ಐ.ಡಿ.ಸಿ. ಯವರು ಬಸವಕಲ್ಯಾಣದಲ್ಲಿ ಎಷ್ಟು ಜಾಗವನ್ನು ಸ್ವಾಧೀನಪಡಿಸಿಕೊಂಡಿದ್ದಾರೆ, ಎಷ್ಟು ಕೈಗಾರಿಕಾ ಶೆಡ್‌ಗಳನ್ನು ನಿರ್ಮಿಸಿದ್ದಾರೆ, ಹಾಗೂ ಎಷ್ಟು ಕೈಗಾರಿಕಾ ನಿವೇಶನಗಳನ್ನು ನಿರ್ಮಿಸಿದ್ದಾರೆ?

(ಇ) ಈ ಕಾರ್ಯಗಳಿಗಾಗಿ ಕಳೆದ 5 ವರ್ಷಗಳಿಂದ ಪ್ರತಿ ವರ್ಷ ಖರ್ಚು ಮಾಡುತ್ತಿರುವ ಹಣವೆಷ್ಟು?

ಶ್ರೀ ಎಸ್.ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :

(ಅ) ಬಸವ ಕಲ್ಯಾಣವನ್ನೊಳಗೊಂಡಂತೆ ಬೀದರ್ ಜಿಲ್ಲೆಯ ಎಲ್ಲಾ ತಾಲ್ಲೂಕುಗಳನ್ನು ವಲಯ-2 ಅಂದರೆ ಅಭಿವೃದ್ಧಿ ಹೊಂದುತ್ತಿರುವ ಪ್ರದೇಶ ಎಂದು ಸರ್ಕಾರದ 1996-2001ರ ಕೈಗಾರಿಕಾ ನೀತಿಯಲ್ಲಿ ವರ್ಗೀಕರಿಸಲಾಗಿದೆ. ಇದರಂತೆ ಸರ್ಕಾರವು ಕೈಗಾರಿಕೆಗಳ ಅಭಿವೃದ್ಧಿಗಾಗಿ ಮೂಲಭೂತ ಸೌಕರ್ಯಗಳಾದ ಭೂಮಿ, ನೀರು, ವಿದ್ಯುಚ್ಛಕ್ತಿ, ರಸ್ತೆ ಮುಂತಾದವುಗಳನ್ನೊಳಗೊಂಡ ಕೈಗಾರಿಕಾ ಪ್ರದೇಶವನ್ನು ಕೆ.ಐ.ಎ.ಡಿ.ಬಿ. ಮೂಲಕ ರಾಷ್ಟ್ರೀಯ ಹೆದ್ದಾರಿ 9 ಇದಕ್ಕೆ ಹೊಂದಿಕೊಂಡಂತೆ ಸಸ್ತಾಪುರ ಗ್ರಾಮದಲ್ಲಿ 68 ಎಕರೆ ಭೂಮಿಯನ್ನು ಅಭಿವೃದ್ಧಿಪಡಿಸಿದೆ. ಅಲ್ಲದೆ ಈ ಭಾಗದಲ್ಲಿ ಆಟೋಮೋಬೈಲ್ ಕೈಗಾರಿಕೆಗಳ ಬೆಳವಣಿಗೆಗೆ ಸಾಕಷ್ಟು

ಅವಕಾಶವಿರುವುದರಿಂದ ಪ್ರತ್ಯೇಕವಾದ ಒಂದು ಆಟೋ ನಗರವನ್ನು 27 ಎಕರೆ ಭೂಮಿಯನ್ನು ಮೀಸಲಿಟ್ಟು 530 ಪ್ಲಾಟುಗಳನ್ನು ವಿಂಗಡಿಸಿ ಈಗಾಗಲೇ 500 ಉದ್ದಿಮೆದಾರರಿಗೆ ಹಂಚಿಕೆ ಮಾಡಲಾಗಿದೆ. ಕಾಯಕ ನಗರ ಯೋಜನೆಯಡಿಯಲ್ಲಿ ಬಸವಕಲ್ಯಾಣ ಸೇರಿದ್ದು ಕಸುಬುದಾರರ ಅಭಿವೃದ್ಧಿಗೆ ಕಾಯಕನಗರ ಸ್ಥಾಪಿಸಲಾಗುವುದು.

(ಅ) ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ (ನಿ) ಬಸವಕಲ್ಯಾಣದಲ್ಲಿ ಮಳಿಗೆ:ನಿವೇಶನಗಳನ್ನು ನಿರ್ಮಿಸಿರುವುದಿಲ್ಲ.

(ಇ) ಕಳೆದ 5 ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ಆಗಿರುವ ವೆಚ್ಚದ ವಿವರ ಕೆಳಕಂಡಂತಿದೆ.

1995-96	ರೂ. 68,93,200
1996-97	ರೂ. 1,20,81,066
1997-98	ರೂ. 1,35,53,105
1998-99	ರೂ. 25,55,606
1999-2000	ರೂ. 4,34,491

ಎಸ್‌ಸಿ:ಎಸ್‌ಟಿ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳು ವಾಸ ಮಾಡದೇ ಇರುವುದು.

2054 (2663) : ಶ್ರೀ ನಾರಾಯಣಸ್ವಾಮಿ ಎ. (ಆನೇಕಲ್) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಆನೇಕಲ್ ಕ್ಷೇತ್ರದಲ್ಲಿ ಬರುವ ಪರಿಶಿಷ್ಟ ಪಂಗಡಗಳ ಮತ್ತು ಸಾರ್ವಜನಿಕ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳು ವಾಸಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಆ) ಇಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಊಟ, ನೀರು ಇತ್ಯಾದಿಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಇ) ಸಾರ್ವಜನಿಕ ಮತ್ತು ಇತರೆ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ.ಗಳಲ್ಲಿ ಕ್ರಮವಾಗಿ 1997-98-99, 99-2000 ಸಾಲಿನಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳ ಶೇಕಡಾವಾರು ಸಂಖ್ಯೆ ತಿಳಿಸುವಿರಾ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

(ಅ) ಇಲ್ಲ.

(ಆ) ಇಲ್ಲ